ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Gamesa Renewable Private Limited ಕಂಪನಿಗೆ ರಾಯಚೂರು ಜಿಲ್ಲೆ, ರಾಯಚೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ತತ್ವಶ: ಅನುಮತಿ ನೀಡಿರುವ 10.20 ಮೆ.ವ್ಯಾಟ್ ಸಾಮರ್ಥ್ಯದ ಯೋಜನೆಯ ಸ್ಥಳದಲ್ಲಿ 50 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಪತ್ರ ಸಂಖ್ಯೆ:ಇಎನ್ 56 ಎನ್‌ಸಿಇ 2014 ದಿನಾಂಕ: 27.08.2014.
2. ಸರ್ಕಾರದ ಆದೇಶ ಸಂಖ್ಯೆ:ಇಎನ್ 148 ಎನ್‌ಸಿಇ 2016 ದಿನಾಂಕ:20.06.2016.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಏಕ ಕಡತ ಸಂಖ್ಯೆ : KRED/08/GWTPL-10.20 MW/Bapuram/Richur/2013/G-1137.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ : 27.08.2014 ರ ಸರ್ಕಾರದ ಪತ್ರದನ್ವಯ M/s Gamesa Wind Turbine Private Limited ಕಂಪನಿಗೆ ರಾಯಚೂರು ಜಿಲ್ಲೆ, ರಾಯಚೂರು ತಾಲ್ಲೂಕಿನ ಸಿದ್ದರಾಮಪುರ್, ಬೀಜನಗೇರೆ, ಗೌಸನಗರ್, ಭಾವಿದೊಡ್ಡಿ, ಬಾಪುರ್, ಬಾಪುರ್ ತಾಂಡ, ದೇವನಪಲ್ಲಿ, ಬೋಲಮನದೊಡ್ಡಿ ಮತ್ತು ರಾಜ್ಯೆ ಬೋಂಡ ಗ್ರಾಮಗಳಲ್ಲಿ 10.20 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಬಗ್ಗೆ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ಎರಡು ವರ್ಷದೊಳಗಾಗಿ ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸತಕ್ಕದೆಂಬ ಷರತ್ತಿಗೊಳಪಟ್ಟು ಯೋಜನೆಗೆ ತತ್ವಶಃ ಅನುಮತಿಯನ್ನು ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರದ ಆದೇಶದನ್ವಯ ಸರ್ಕಾರದ ಪತ್ರ ಸಂಖ್ಯೆ: ಇಎನ್ 56 ಎನ್‌ಸಿಇ 2014, ದಿನಾಂಕ: 27.08.2014 ರಲ್ಲಿ M/s Gamesa Wind Turbine Private Limited ಕಂಪನಿಗೆ ತತ್ವಶಃ ಅನುಮೋದನೆ ನೀಡಲಾಗಿದ್ದ 10.20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹೆಸರನ್ನು ಇನ್ನು ಮುಂದೆ M/s Gamesa Renewable Private Limited ಕಂಪನಿ ಎಂದು ಹೆಸರು ಬದಲಾಯಿಸಲು ಸಹಮತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಏಕ ಕಡತ ಪದ್ಧತಿಯಡಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Gamesa Renewable Private Limited ಕಂಪನಿಯು ತಮಗೆ ರಾಯಚೂರು ಜಿಲ್ಲೆ, ರಾಯಚೂರು ತಾಲ್ಲೂಕಿನ ಸಿದ್ದರಾಮಪುರ್, ಬೀಜನಗೇರೆ, ಗೌಸನಗರ್, ಭಾವಿದೊಡ್ಡಿ, ಬಾಪುರ್, ಬಾಪುರ್ ತಾಂಡ, ದೇವನಪಲ್ಲಿ, ಬೋಲಮನದೊಡ್ಡಿ ಮತ್ತು ರಾಜ್ಯೆ ಬೋಂಡ ಗ್ರಾಮಗಳಲ್ಲಿ ತತ್ವಶಃ ಅನುಮತಿ ನೀಡಿರುವ 10.20 ಮೆ.ವ್ಯಾ. ಸಾಮರ್ಥ್ಯದ ಯೋಜನೆಯ ಭೌಗೋಳಿಕ ಪ್ರದೇಶದಲ್ಲಿಯೇ 50 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದೆಂದು. ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕ್ರೆಡಲ್‌ಗೆ

Wind Sector
Ward No. 1226
Date: 21/11/16
Sig........

GM (Tech) I/C
KREDL

2)

ಸಲ್ಲಿಸಿರುತ್ತಾರೆ. ಈ ಹಿನ್ನಲೆಯಲ್ಲಿ, M/s Gamesa Renewable Private Limited ಕಂಪನಿಗೆ ರಾಯಚೂರು ಜಿಲ್ಲೆ, ರಾಯಚೂರು ತಾಲ್ಲೂಕಿನ ಸಿದ್ದರಾಮಪುರ್, ಬೀಜನಗೆರೆ, ಗೌಸನಗರ್, ಭಾವಿದೊಡ್ಡಿ, ಬಾಪುರ್, ಬಾಪುರ್ ತಾಂಡ, ದೇವನಪಲ್ಲಿ, ಬೋಲಮನದೊಡ್ಡಿ ಮತ್ತು ರಾಜೈ ಬೋಂಡ ಗ್ರಾಮಗಳಲ್ಲಿ ತತ್ವಶಃ ಅನುಮತಿ ನೀಡಿರುವ 10.20 ಮೆ.ವ್ಯಾ. ಸಾಮರ್ಥ್ಯದ ಯೋಜನೆಯ ಭೌಗೋಳಿಕ ಪ್ರದೇಶದಲ್ಲಿಯೇ 50 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಬಹುದೆಂದು, ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ, ಇನ್ನಿತರೆ ವಿವರಗಳೊಂದಿಗೆ ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 314 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ:15.11.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, M/s Gamesa Renewable Private Limited ಕಂಪನಿಗೆ ರಾಯಚೂರು ಜಿಲ್ಲೆ, ರಾಯಚೂರು ತಾಲ್ಲೂಕಿನ ಸಿದ್ದರಾಮಪುರ್, ಬೀಜನಗೆರೆ, ಗೌಸನಗರ್, ಭಾವಿದೊಡ್ಡಿ, ಬಾಪುರ್, ಬಾಪುರ್ ತಾಂಡ, ದೇವನಪಲ್ಲಿ, ಬೋಲಮನದೊಡ್ಡಿ ಮತ್ತು ರಾಜೈ ಬೋಂಡ ಗ್ರಾಮಗಳಲ್ಲಿ ತತ್ವಶಃ ಅನುಮತಿ ನೀಡಿರುವ 10.20 ಮೆ.ವ್ಯಾ. ಸಾಮರ್ಥ್ಯದ ಯೋಜನೆಯ ಭೌಗೋಳಿಕ ಪ್ರದೇಶದಲ್ಲಿಯೇ 50 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

Schedule

**Geographical area description for 50 MW capacity wind power project of M/s Gamesa Renewable Private Limited**

| Sl. No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 56 H/8 | 50 MW<br>(25 Nos x 2000 kW) | Sidrampur, Bijangere, Gausanagar, Bavidoddi, Bapur, Bapur Tanda, Devanpalli, Bolamanadoddi and Rajaibonda Villages of Raichur Taluk, Raichur District. | The proposed area is covered in Private Land near Raichur Town and the road crossing towards Bijanagere to Raichur. The area consists of several water bodies, eucalyptus plantation and rockout crops. Also telephone line crossing in the area. The identified area is having several peaks and surrounded by the points A, B, C, D and are held in the following Geographical co-ordinates as:<br>Point A:Lat:16°8'17.52"N, Long: 77°22'55.92"E<br>Point B:Lat:16°11'35.52"N, Long:77°22'52.68"E<br>Point C:Lat:16°11'33"N, Long: 77°29'4.2"E<br>Point D:Lat:16°8'21.12"N, Long:77°29'2.04"E<br>Peaks: 472, 411, 440, 448, 474, 416, 457 and 428m Amsl |
| | Total | 50 MW | | |

...3)

ಷರತ್ತುಗಳು / ನಿಬಂಧನೆಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ : 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2. ಅಭಿವೃದ್ಧಿದಾರರು ಈ ಯೋಜನೆಯನ್ನು ದಿನಾಂಕ:27.08.2014 ರಿಂದ ಜಾರಿಗೆ ಬರುವಂತೆ ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮ್‌ನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ, ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಮತ್ತು ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.

7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಯಾವುದೇ ರೀತಿಯ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಂದಾಯ ಮಾಡತಕ್ಕದ್ದು.

10. ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.